ಅಧ್ಯಕ್ಷರು : ಈಗ ಪ್ರಶ್ನೋತ್ತರ, ದಯವಿಟ್ಟು ಸದನದ ಕಲಾಪ ನಡೆಸುವುದಕ್ಕೆ ಸಹಕಾರ ಮಾಡಿ.

(ಗೊಂದಲ)

ಶ್ರೀ ಆರ್. ಅಶೋಕ್ : ಮಾನ್ಯ ಅಧ್ಯಕ್ಷರೆ, ಬಿಲ್ಸ್ ಇವೆ, ಅವುಗಳನ್ನು ತೆಗೆದುಕೊಳ್ಳಿ.

(ಗೊಂದಲ)

ಅಧ್ಯಕ್ಷರು : ನಾನು ಎಲ್ಲ ಸದಸ್ಯರನ್ನು ವಿನಂತಿ ಮಾಡುತ್ತೇನೆ, ದಯವಿಟ್ಟು ನಿಮ್ಮ ಸ್ಥಾನಗಳಿಗೆ ಹೋಗಿ.

(ಗೊಂದಲ)

ಅಧ್ಯಕ್ಷರು : ಇಲ್ಲಿ ಏನು ಮಾತನಾಡಿದರೂ ದಾಖಲೆಗೆ ಹೋಗುವುದಿಲ್ಲ. ಬಾವಿಯಲ್ಲಿ ನಿಂತು ಮಾತನಾಡುವುದು ಯಾವುದೂ ದಾಖಲೆಗೆ ಹೋಗುವುದಿಲ್ಲ.

(ಗೊಂದಲ)

ಶ್ರೀ ಬಂಡೆಪ್ಪ ಕಾಶೆಂಪೂರ್ (ತಮ್ಮ ಸ್ಥಾನದಿಂದ) : ಸಿ.ಬಿ.ಐ. ತನಿಖೆ ಬಿಟ್ಟು ಬೇರೆ ಯಾವುದೇ ತನಿಖೆಗೆ ಸಿದ್ಧರಿದ್ದೇವೆ ಎಂದು ಮುಖ್ಯಮಂತ್ರಿಗಳು ಹೇಳಿದ್ದರು. ಆ ರೀತಿ ಬೇರೆ ತನಿಖೆ ಮಾಡಿಸಿ, ಅವರು ಆ ರೀತಿ ಹೇಳಿದರಲ್ಲವೇ ?

(ಗೊಂದಲ)

ಅಧ್ಯಕ್ಷರು : ದಯವಿಟ್ಟು ತಮ್ಮ ತಮ್ಮ ಸ್ಥಾನಗಳಿಗೆ ಹೋಗಬೇಕು ಎಂದು ನಾನು ವಿನಂತಿಯನ್ನು ಮಾಡುತ್ತೇನೆ. ಈಗ ಪ್ರಶ್ನೋತ್ತರ.

2. ಪ್ರಶ್ನೋತ್ತರ :

ಅ) ಚುಕ್ಕೆ ಗುರ್ತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು.

ಪ್ರಶ್ನೆ ಸಂಖ್ಯೆ 545

(ಮಾನ್ಯ ಸದಸ್ಯರು ಪ್ರಶ್ನೆಯನ್ನು ಕೇಳಲಿಲ್ಲ)

ಪ್ರಶ್ನೆ ಸಂಖ್ಯೆ 1148

(ಮಾನ್ಯ ಸದಸ್ಯರು ಪ್ರಶ್ನೆಯನ್ನು ಕೇಳಲಿಲ್ಲ)

ಪ್ರಶ್ನೆ ಸಂಖ್ಯೆ 239

(ಮಾನ್ಯ ಸದಸ್ಯರು ಪ್ರಶ್ನೆಯನ್ನು ಕೇಳಲಿಲ್ಲ)

ಪ್ರಶ್ನೆ ಸಂಖ್ಯೆ 1150

(ಮಾನ್ಯ ಸದಸ್ಯರು ಪ್ರಶ್ನೆಯನ್ನು ಕೇಳಲಿಲ್ಲ)

ಪ್ರಶ್ನೆ ಸಂಖ್ಯೆ 1076

(ಮಾನ್ಯ ಸದಸ್ಯರು ಪ್ರಶ್ನೆಯನ್ನು ಕೇಳಲಿಲ್ಲ)

ಪ್ರಶ್ನೆ ಸಂಖ್ಯೆ 238

(ಮಾನ್ಯ ಸದಸ್ಯರು ಪ್ರಶ್ನೆಯನ್ನು ಕೇಳಲಿಲ್ಲ)

ಪ್ರಶ್ನೆ ಸಂಖ್ಯೆ 535

(ಮಾನ್ಯ ಸದಸ್ಯರು ಪ್ರಶ್ನೆಯನ್ನು ಕೇಳಲಿಲ್ಲ)

ಪ್ರಶ್ನೆ ಸಂಖ್ಯೆ 916

(ಮಾನ್ಯ ಸದಸ್ಯರು ಪ್ರಶ್ನೆಯನ್ನು ಕೇಳಲಿಲ್ಲ)

ಪ್ರಶ್ನೆ ಸಂಖ್ಯೆ 1139

(ಮಾನ್ಯ ಸದಸ್ಯರು ಪ್ರಶ್ನೆಯನ್ನು ಕೇಳಲಿಲ್ಲ)

ಪ್ರಶ್ನೆ ಸಂಖ್ಯೆ 1048

(ಮಾನ್ಯ ಸದಸ್ಯರು ಪ್ರಶ್ನೆಯನ್ನು ಕೇಳಲಿಲ್ಲ)

ಪ್ರಶ್ನೆ ಸಂಖ್ಯೆ 1144

(ಮಾನ್ಯ ಸದಸ್ಯರು ಪ್ರಶ್ನೆಯನ್ನು ಕೇಳಲಿಲ್ಲ)

ಪ್ರಶ್ನೆ ಸಂಖ್ಯೆ 250

(ಈ ಪ್ರಶ್ನೆಗೆ ಸರ್ಕಾರದಿಂದ ಉತ್ತರ ಬಂದಿಲ್ಲವೆಂದು ಮಾನ್ಯ ಅಧ್ಯಕ್ಷರು ತಿಳಿಸಿದರು.

ಪ್ರಶ್ನೆ ಸಂಖ್ಯೆ 81

(ಮಾನ್ಯ ಸದಸ್ಯರು ಪ್ರಶ್ನೆಯನ್ನು ಕೇಳಲಿಲ್ಲ)

ಪ್ರಶ್ನೆ ಸಂಖ್ಯೆ 940

(ಮಾನ್ಯ ಸದಸ್ಯರು ಪ್ರಶ್ನೆಯನ್ನು ಕೇಳಲಿಲ್ಲ)

ಪ್ರಶ್ನೆ ಸಂಖ್ಯೆ 782

(ಮಾನ್ಯ ಸದಸ್ಯರು ಪ್ರಶ್ನೆಯನ್ನು ಕೇಳಲಿಲ್ಲ)

ಅಧ್ಯಕ್ಷರು : ಪ್ರಶ್ನೋತ್ತರ ವೇಳೆ ಮುಗಿಯಿತು.

(ಗೊಂದಲ)

(ಸದನದ ಬಾವಿಯಲ್ಲಿ ಧರಣಿ ನಿರತರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)

ಆ) ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು.

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ಸಚಿವರು) : ದಿನಾಂಕ: 16–3–2011 ರ 13 ನೇ ಪಟ್ಟಿಯಿಂದ ಲಿಖಿತ ಮೂಲಕ ಉತ್ತರಿಸುವ 54 ಪ್ರಶ್ನೆಗಳ ಪೈಕಿ 44 ಪ್ರಶ್ನೆಗಳ ಉತ್ತರಗಳನ್ನು ಹಾಗೂ ದಿನಾಂಕ: 15–3–2011 ರ 12 ನೇ ಪಟ್ಟಿಯಿಂದ ಸದನದಲ್ಲಿ ಉತ್ತರಿಸುವ 15 ಪ್ರಶ್ನೆಗಳ ಪೈಕಿ 13 ಪ್ರಶ್ನೆಗಳ ಉತ್ತರಗಳನ್ನು ಹಾಗೂ ಲಿಖಿತ ಮೂಲಕ ಉತ್ತರಿಸುವ 35 ಪ್ರಶ್ನೆಗಳ ಪೈಕಿ 24 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಯಿತು.

16–3–2011 ರ ಚುಕ್ಕೆ ಗುರುತಿನ ಪ್ರಶ್ನೋತ್ತರಗಳು

16–3–2011 ರ ಚುಕ್ಕೆ ಗುರುತಿಲ್ಲದ ಪ್ರಶ್ನೋತ್ತರಗಳು

ಅನುಬಂಧ– I & II

15–3–2011 ರ ಚುಕ್ಕೆ ಗುರುತಿನ ಪ್ರಶ್ನೋತ್ತರಗಳು

15–3–2011 ರ ಚುಕ್ಕೆ ಗುರುತಿಲ್ಲದ ಪ್ರಶ್ನೋತ್ತರಗಳು

ಅನುಬಂಧ – III & IV

ಅನುಬಂಧ – I, II, III & IV

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು :

ಕಾರ್ಯದರ್ಶಿ : ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕ, 2011 ಹಾಗೂ ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ, 2011 ನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

ಅನುಬಂಧ – V & VI

4. ಅರ್ಜಿಯನ್ನೊಪ್ಪಿಸುವುದು :

ಶ್ರೀ ಎನ್. ಯೋಗೀಶ್‌ಭಟ್ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) : ಮಾನ್ಯ ಅಧ್ಯಕ್ಷರೆ, ಕುದುರೆಮುಖದ ಕಬ್ಬಿಣದ ಅದಿರು ಮತ್ತು ಇತರ ವಸ್ತುಗಳು ಲಕ್ಯಾ ಡ್ಯಾಂ, ಕುದುರೆಮುಖ ಇಲ್ಲಿ ಸಂಗ್ರಹವಾಗಿರುವ ಬಗ್ಗೆ ಅರ್ಜಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು : ಅರ್ಜಿಯನ್ನೊಪ್ಪಿಸಲಾಯಿತು.

(ಕಾಂಗ್ರೆಸ್ ಮತ್ತು ಜೆ.ಡಿ.(ಎಸ್) ಪಕ್ಷದ ಸದಸ್ಯರು ಸದನದ ಬಾವಿಯಲ್ಲಿ ಧರಣಿನಿರತರಾಗಿದ್ದರು)

5. ಶಾಸನ ರಚನೆ :

ವಿಧೇಯಕಗಳನ್ನು ಮಂಡಿಸುವುದು

(1) ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ)(ತಿದ್ದುಪಡಿ) ವಿಧೇಯಕ, 2011

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎ. ರವೀಂದ್ರನಾಥ್ (ತೋಟಗಾರಿಕೆ ಮತ್ತು ಸಕ್ಕರೆ ಸಚಿವರು) : ಮಾನ್ಯ ಅಧ್ಯಕ್ಷರೆ, 2011 ನೇ ಸಾಲಿನ ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ :

2011ನೇ ಸಾಲಿನ ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ)(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು